**All India Radio: Bangalore**
**National Bulletin In Kannada**
**27.11.2025  1.10 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**27.11.2025  1.10 am**

**<>><><*><><<>**

**ಮುಖ್ಯಾಂಶಗಳು**

**೧. ಚಾಣಕ್ಯ ರಕ್ಷಣಾ ಸಂವಾದ -೨೦೨೫ರ ಮೂರನೇ ಆವೃತ್ತಿ ಉದ್ಘಾಟಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು**

**೨. ಭಾರತೀಯ ಬಾಹ್ಯಾಕಾಶ ನವೋದ್ಯಮ ಸ್ಕೈರೂಟ್ಸ್ ಇನ್ಫಿನಿಟಿ ಕ್ಯಾಂಪಸ್‌ಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ**

**೩. ಪ್ರಸಕ್ತ ಸಾಲಿನಲ್ಲಿ ಭಾರತದ ಆರ್ಥಿಕತೆ ಶೇಕಡ ೬.೬ರಷ್ಟು ಬೆಳವಣಿಗೆ ನಿರೀಕ್ಷೆ - ಐಎಂಎಫ್**

**೪. ಇಂಡೋನೇಷಿಯಾ ರಕ್ಷಣಾ ಸಚಿವರೊಂದಿಗೆ ಇಂದು ಸಚಿವ ರಾಜನಾಥ್ ಸಿಂಗ್ ದ್ವಿಪಕ್ಷೀಯ ಮಾತುಕತೆ**

**<>><><*><><<>**

ಭಾರತೀಯ ಸಶಸ್ತ್ರ ಪಡೆಗಳು ದೇಶದ ಸಾರ್ವಭೌತ್ವವವನ್ನು ಮುನ್ನಡೆಸುವಲ್ಲಿ ವೃತ್ತಿಪರತೆ ಮತ್ತು ದೇಶಭಕ್ತಿಯನ್ನು ಪ್ರದರ್ಶಿಸಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಚಾಣಕ್ಯ ರಕ್ಷಣಾ ಸಂವಾದ -೨೦೨೫ರ ಮೂರನೇ ಆವೃತ್ತಿಯನ್ನು ಉದ್ಘಾಟಿಸಿದ ಅವರು, ಪ್ರತಿಯೊಂದು ಭದ್ರತಾ ಸವಾಲಿನ ಸಂದರ್ಭದಲ್ಲೂ ಸಶಸ್ತ್ರ ಪಡೆಗಳು ಗಮನಾರ್ಹ ಹೊಂದಾಣಿಕೆ ಮತ್ತು ದೃಢ ಸಂಕಲ್ಪವನ್ನು ಪ್ರದರ್ಶಿಸಿವೆ ಎಂದು ಶ್ಲಾಘಿಸಿದರು. ಇತ್ತೀಚಿನ ಆಪರೇಷನ್ ಸಿಂಧೂರ ಕಾರ್ಯಾಚರಣೆಯ ಯಶಸ್ಸು ದೇಶದ ಭಯೋತ್ಪಾದನೆ ನಿಗ್ರಹ ಮತ್ತು ತಡೆಗಟ್ಟುವ ಕಾರ್ಯತಂತ್ರದಲ್ಲಿ ಒಂದು ನಿರ್ಣಾಯಕ ಕ್ಷಣವಾಗಿದೆ ಎಂದು ಪ್ರತಿಪಾದಿಸಿದರು.

**ಧ್ವನಿ : ರಾಷ್ಟ್ರಪತಿ ದ್ರೌಪದಿ ಮುರ್ಮು ( ೨೦ ಸೆಕೆಂಡ್‌ಗಳು)**

ಭಾರತೀಯ ರಕ್ಷಣಾ ಪಡೆಗಳು ತಮ್ಮ ಕಾರ್ಯಾಚರಣೆಯ ಪಾತ್ರಗಳನ್ನು ಮೀರಿ ರಾಷ್ಟ್ರೀಯ ಅಭಿವೃದ್ಧಿಯ ಆಧಾರ ಸ್ತಂಭವಾಗಿ ಉಳಿದಿವೆ. ಗಡಿಗಳನ್ನು ಬಲಪಡಿಸುವುದರ ಜೊತೆಗೆ

ಮೂಲಸೌಕರ್ಯ, ಸಂಪರ್ಕ, ಪ್ರವಾಸೋದ್ಯಮ ಮತ್ತು ಶಿಕ್ಷಣದ ಮೂಲಕ ರಕ್ಷಣಾ ಪಡೆಗಳು ಗಡಿ ಪ್ರದೇಶದ ಅಭಿವೃದ್ಧಿಗೆ ಸಹಾಯ ಮಾಡಿವೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

**<>><><*><><<>**

ಒಡಿಶಾ ವಿಧಾನಸಭೆಯ ಚಳಿಗಾಲದ ಅಧಿವೇಶನ ಇಂದಿನಿಂದ ಆರಂಭವಾಗಲಿದ್ದು, ಮೊದಲ ದಿನವಾದ ಇಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅಧಿವೇಶನ ಉದ್ದೇಶಿಸಿ ಮಾತನಾಡಲಿದ್ದಾರೆ. ರಾಷ್ಟ್ರಪತಿ ದ್ರೌಪದಿ ಮುರ್ಮು, ಒಡಿಶಾ ವಿಧಾನಸಭೆಯಲ್ಲಿ ಶಾಸಕರಾಗಿ ತಮ್ಮ ರಾಜಕೀಯ ಜೀವನ ಆರಂಭಿಸಿದ್ದರು. ಈ ಭೇಟಿ ವೇಳೆ ಅವರು ತಾವು ಕಾರ್ಯನಿರ್ವಹಣೆ ಮಾಡುತ್ತಿದ್ದ ಕೊಠಡಿಗೂ ತೆರಳಿ ವೀಕ್ಷಣೆ ಮಾಡಲಿದ್ದಾರೆ. ಇದೇ ಮೊದಲ ಬಾರಿಗೆ, ಒಡಿಶಾ ವಿಧಾನಸಭೆಯ ಅಧಿವೇಶನವನ್ನು ಉದ್ದೇಶಿಸಿ ದೇಶದ ರಾಷ್ಟ್ರಪತಿಯೊಬ್ಬರು ಮಾತನಾಡುತ್ತಿರುವುದು ವಿಶೇಷವಾಗಿದೆ.

**<>><><*><><<>**

ಭಾರತದ ಬಾಹ್ಯಾಕಾಶ ಕ್ಷೇತ್ರವು ಜಾಗತಿಕ ಹೂಡಿಕೆದಾರರಿಗೆ ಆಕರ್ಷಕ ತಾಣವಾಗುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ವಿಡಿಯೋ ಕಾನ್ಫರೆನ್ಸ್ ಮೂಲಕ ಭಾರತೀಯ ಬಾಹ್ಯಾಕಾಶ ನವೋದ್ಯಮ ಸ್ಕೈರೂಟ್‌ನ ಇನ್ಫಿನಿಟಿ ಕ್ಯಾಂಪಸ್ ಉದ್ಘಾಟಿಸಿದ ನಂತರ ಮಾತನಾಡಿದ ಅವರು, ಭಾರತದ ಬಾಹ್ಯಾಕಾಶ ಕ್ಷೇತ್ರದಲ್ಲಿ ಸರ್ಕಾರ ಹಲವಾರು ಐತಿಹಾಸಿಕ ಸುಧಾರಣೆಗಳನ್ನು ಕೈಗೊಂಡಿದೆ ಎಂದರು. ಸರ್ಕಾರವು ಬಾಹ್ಯಾಕಾಶ ವಲಯವನ್ನು ಖಾಸಗಿ ವಲಯಕ್ಕಾಗಿ ಮುಕ್ತಗೊಳಿಸಿದೆ. ಇದರಿಂದಾಗಿ ನವೋದ್ಯಮಗಳು ಮತ್ತು ಉದ್ಯಮವು ದೇಶದ ವೈಜ್ಞಾನಿಕ ಪರಿಸರ ವ್ಯವಸ್ಥೆಯೊಂದಿಗೆ ನಿಕಟವಾಗಿ ಕೆಲಸ ಮಾಡಲು ಅನುವು ಮಾಡಿಕೊಡುತ್ತದೆ ಎಂದು ಹೇಳಿದರು. ಮುಂಬರುವ ವರ್ಷಗಳಲ್ಲಿ ಜಾಗತಿಕ ಬಾಹ್ಯಾಕಾಶ ಆರ್ಥಿಕತೆಯು ಹಲವು ಪಟ್ಟು ಬೆಳೆಯಲಿದೆ. ಇದು ದೇಶದ ಯುವಜನರಿಗೆ ಆಗಾಧವಾದ ಹೊಸ ಅವಕಾಶಗಳನ್ನು ತೆರೆಯಲಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ ( ೨೭ ಸೆಕೆಂಡ್‌ಗಳು)**

ಪ್ರಸ್ತುತ ೩೦೦ಕ್ಕೂ ಹೆಚ್ಚು ಬಾಹ್ಯಾಕಾಶ ನವೋದ್ಯಮಗಳು ಭಾರತದ ಭವಿಷ್ಯಕ್ಕೆ ಹೊಸ ಭರವಸೆಯನ್ನು ಮೂಡಿಸುತ್ತಿವೆ ಎಂದು ಪ್ರಧಾನಿ ತಿಳಿಸಿದರು.

**<>><><*><><<>**

೨೦೨೫-೨೬ರಲ್ಲಿ ಭಾರತದ ಆರ್ಥಿಕತೆಯು ಶೇಕಡ ೬.೬ ರಷ್ಟು ಬೆಳವಣಿಗೆ ಹೊಂದುವ ನಿರೀಕ್ಷೆಯಿದೆ ಎಂದು ಅಂತಾರಾಷ್ಟ್ರೀಯ ಹಣಕಾಸು ನಿಧಿ-ಐಎಂಎಫ್ ತಿಳಿಸಿದೆ. ಅಮೆರಿಕ ವಿಧಿಸಿರುವ ಶೇಕಡ ೫೦ರಷ್ಟು ಸುಂಕದ ಪ್ರತಿಕೂಲ ಪರಿಣಾಮದಿಂದ ದೇಶವನ್ನು ಪಾರು ಮಾಡಲು ಸರಕು ಮತ್ತು ಸೇವಾ ತೆರಿಗೆಯಲ್ಲಿನ ಸುಧಾರಣೆಗಳು ಸಹಾಯ ಮಾಡುವ ಸಾಧ್ಯತೆಯಿದೆ ಎಂದು ಐಎಂಎಫ್ ಹೇಳಿದೆ. ಭಾರತದ ಆರ್ಥಿಕತೆಯು ಉತ್ತಮ ಸ್ಥಿತಿಯಲ್ಲಿ ಮುಂದುವರಿದಿದೆ. ೨೦೨೪-೨೫ರ ಹಣಕಾಸು ವರ್ಷದಲ್ಲಿ ಶೇಕಡ ೬.೫ರ ಆರ್ಥಿಕ ಬೆಳವಣಿಗೆಯ ನಂತರ, ೨೦೨೫-೨೬ರ ಹಣಕಾಸು ವರ್ಷದ ಮೊದಲ ತ್ರೈಮಾಸಿಕದಲ್ಲಿ ನೈಜ ಜಿಡಿಪಿ ಶೇಕಡ ೭.೮ರಷ್ಟು ವಿಸ್ತರಿಸಿದೆ ಎಂದು ಐಎಂಎಫ್ ಕಾರ್ಯಕಾರಿ ಮಂಡಳಿ ತಿಳಿಸಿದೆ.

<>><><*><><<>

ಈ ಹಣಕಾಸು ವರ್ಷದಲ್ಲಿ ಒಟ್ಟು ಮುಂಗಾರು ಆಹಾರ ಧಾನ್ಯ ಉತ್ಪಾದನೆಯು ೧೭೩.೩೩ ದಶಲಕ್ಷ ಟನ್ ಎಂದು ಅಂದಾಜಿಸಲಾಗಿದೆ ಎಂದು ಕೇಂದ್ರ ಸರ್ಕಾರ ತಿಳಿಸಿದೆ. ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್ ಅವರು, ಮುಂಗಾರು ಬೆಳೆಗಳ ಉತ್ಪಾದನೆಯ ಮೊದಲ ಮುಂಗಡ ಅಂದಾಜು ಪತ್ರವನ್ನು ಬಿಡುಗಡೆ ಮಾಡಿದರು. ೨೦೨೫-೨೬ರ ಮೊದಲ ಮುಂಗಡ ಅಂದಾಜಿನ ಪ್ರಕಾರ, ಅಕ್ಕಿ ಉತ್ಪಾದನೆಯು ೧೨೪ ದಶಲಕ್ಷ ಟನ್‌ಗಳಿಗಿಂತ ಹೆಚ್ಚು ಅಂದಾಜಿಸಲಾಗಿದೆ. ಇದು ಕಳೆದ ವರ್ಷದ ಮುಂಗಾರು ಋತುವಿನ ಅಕ್ಕಿ ಉತ್ಪಾದನೆಗಿಂತ ೧.೭೩ ದಶಲಕ್ಷ ಟನ್‌ನಷ್ಟು ಹೆಚ್ಚಾಗಿದೆ. ಒಟ್ಟು ಮುಂಗಾರು ಧಾನ್ಯಗಳ ಉತ್ಪಾದನೆಯು ೪೧.೪೧ ದಶಲಕ್ಷ ಟನ್ ಹಾಗೂ ದ್ವಿದಳ ಧಾನ್ಯಗಳ ಉತ್ಪಾದನೆಯು ೭.೪೧ ದಶಲಕ್ಷ ಟನ್ ಎಂದು ಅಂದಾಜಿಸಲಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌವ್ಹಾಣ್ ತಿಳಿಸಿದ್ದಾರೆ. ದ್ವಿದಳ ಧಾನ್ಯಗಳಲ್ಲಿ, ತೊಗರಿ ಉತ್ಪಾದನೆಯು ಸುಮಾರು ೩.೬೦ ದಶಲಕ್ಷ ಟನ್, ಉದ್ದಿನಬೇಳೆ ೧.೨೦ ದಶಲಕ್ಷ ಟನ್ ಹಾಗೂ ಹೆಸರುಕಾಳು ೧.೭೨ ದಶಲಕ್ಷ ಟನ್ ಎಂದು ಅಂದಾಜಿಸಲಾಗಿದೆ. ಕಬ್ಬು ಉತ್ಪಾದನೆಯು ೪೭೫ ದಶಲಕ್ಷ ಟನ್ ಮತ್ತು ಹತ್ತಿ ಉತ್ಪಾದನೆಯು ೨೯ ದಶಲಕ್ಷ ಬೇಲ್ಸ್ ಎಂದು ಅಂದಾಜಿಸಲಾಗಿದೆ ಎಂದು ಸಚಿವರು ಮಾಹಿತಿ ನೀಡಿದರು.

<>><><*><><<>

ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಇಂದು ನವದೆಹಲಿಯಲ್ಲಿ ಇಂಡೋನೇಷ್ಯಾ ರಕ್ಷಣಾ ಸಚಿವ ಸ್ಜಾಫ್ರಿ ಸ್ಜಾಮ್‌ಸಿದ್ದೀನ್ ಅವರೊಂದಿಗೆ ಮೂರನೇ ಭಾರತ-ಇಂಡೋನೇಷ್ಯಾ ರಕ್ಷಣಾ ಸಚಿವರ ಸಂವಾದದ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ. ಉಭಯ ನಾಯಕರು ಪ್ರಾದೇಶಿಕ ಭದ್ರತಾ ಬೆಳವಣಿಗೆಗಳನ್ನು ಪರಿಶೀಲಿಸುತ್ತಾರೆ, ಬಹುಪಕ್ಷೀಯ ವಿಷಯಗಳ ಬಗ್ಗೆ ಚರ್ಚಿಸುತ್ತಾರೆ ಮತ್ತು

ದ್ವಿಪಕ್ಷೀಯ ರಕ್ಷಣಾ ಸಹಕಾರವನ್ನು ಬಲಪಡಿಸುವ ನಿಟ್ಟಿನಲ್ಲಿ ಹೊಸ ಕ್ಷೇತ್ರಗಳನ್ನು ಅನ್ವೇಷಿಸುತ್ತಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಇಂಡೋನೇಷ್ಯಾ ಸಚಿವರು ಎರಡು ದಿನಗಳ ಭಾರತ ಭೇಟಿಯಲ್ಲಿದ್ದಾರೆ. ಈ ಭೇಟಿಯು ಭಾರತ-ಇಂಡೋನೇಷ್ಯಾ ರಕ್ಷಣಾ ಸಂಬಂಧಗಳಿಗೆ ನೀಡುವ ಕಾರ್ಯತಂತ್ರದ ಮಹತ್ವವನ್ನು ಮತ್ತಷ್ಟು ಬಲಪಡಿಸುತ್ತದೆ.

**<>><><*><><<>**

ಭಾರತದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರು, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ಸಹಾಯಕ ಸಂಸ್ಥೆಯ ಅಧ್ಯಕ್ಷರಾಗಿ ನೇಮಕಗೊಂಡಿದ್ದಾರೆ. ಸ್ವೀಡನ್‌ನ ಸ್ಟಾಕ್ ಹೊಂನಲ್ಲಿ ಡಿಸೆಂಬರ್ ೩ ರಂದು ನಡೆಯಲಿರುವ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ಮತ್ತು ಚುನಾವಣಾ ಸಹಾಯಕ ಸಂಸ್ಥೆಯ ಮಂಡಳಿಯ ಸಭೆಯಲ್ಲಿ ಜ್ಞಾನೇಶ್ ಕುಮಾರ್, ಅಧಿಕಾರ ಸ್ವೀಕರಿಸಲಿದ್ದಾರೆ. ೩೫ ರಾಷ್ಟ್ರಗಳು ಈ ಸಂಸ್ಥೆಯ ಸದಸ್ಯತ್ವ ಹೊಂದಿವೆ.

**<>><><*><><<>**

ಭಾರತ-ಯುಎಇ ಸಮಗ್ರ ಆರ್ಥಿಕ ಪಾಲುದಾರಿಕೆ ಒಪ್ಪಂದ ಅಡಿಯಲ್ಲಿ ಜಂಟಿ ಸಮಿತಿಯ ಮೂರನೇ ಸಭೆ ಯಶಸ್ವಿಯಾಗಿ ನಡೆದಿದೆ. ವಾಣಿಜ್ಯ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ಅಜಯ್ ಬದು ಹಾಗೂ ಯುಎಇ ಅಂತಾರಾಷ್ಟ್ರೀಯ ವ್ಯಾಪಾರ, ವ್ಯವಹಾರಗಳ ಸಹಾಯಕ ಕಾರ್ಯದರ್ಶಿ ಜುಮಾ ಅಲ್ಕೈಟ್ ನವದೆಹಲಿಯಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿದ್ದರು. ೨೦೨೪-೨೫ರಲ್ಲಿ ಭಾರತ ಮತ್ತು ಯುಎಇ ನಡುವೆ ನೂರು ಶತಕೋಟಿ ಅಮೆರಿಕನ್ ಡಾಲರ್‌ಗಿಂತಲೂ ಹೆಚ್ಚು ದಾಟಿದ ದ್ವಿಪಕ್ಷೀಯ ವ್ಯಾಪಾರದಲ್ಲಿನ ಬೆಳವಣಿಗೆಯನ್ನು ಉಭಯ ಕಡೆಯವರು ಸ್ವಾಗತಿಸಿದರು.

**<>><><*><><<>**

ಈ ವರ್ಷದ ಭಾರತ ಅಂತಾರಾಷ್ಟ್ರೀಯ ವ್ಯಾಪಾರ ಮೇಳಕ್ಕೆ ಇಂದು ತೆರೆ ಬೀಳಲಿದೆ. ಈ ತಿಂಗಳ ೧೪ರಂದು ನವದೆಹಲಿಯ ಭಾರತ ಮಂಟಪಂನಲ್ಲಿ ಪ್ರಾರಂಭವಾದ ೧೪ ದಿನಗಳ ಬೃಹತ್ ಜಾಗತಿಕ ವ್ಯಾಪಾರ ಮೇಳವು ಭಾರತದ ಶ್ರೀಮಂತ ವೈವಿಧ್ಯತೆಯನ್ನು ಪ್ರದರ್ಶಿಸಿತು.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ೨.೩೦ ಕ್ಕೆ ><><<>**